**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** 2024-25ನೇ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದ ಹಾನಿಯಾಗಿರುವ ಮೂಲಭೂತ ಸೌಕರ್ಯಗಳ ತುರ್ತು ರಿಪೇರಿ, ಮಾನವ ಹಾಗೂ ಪ್ರಾಣಿ ಜೀವಹಾನಿ ಮತ್ತು ಮನೆ ಹಾನಿಗಳಿಗೆ ಪರಿಹಾರ ನೀಡಲು ಬೀದರ್ ಜಿಲ್ಲೆಗೆ ರಾಜ್ಯ ವಿಪತ್ತು ನಿರ್ವಹಣಾ ನಿಧಿಯಡಿ ಅನುದಾನ ಬಿಡುಗಡೆ ಮಾಡುವ ಕುರಿತು.

**ಓದಲಾಗಿದೆ:** ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರ ಪತ್ರ ಸಂಖ್ಯೆ ಕಂ:ಸಿಎಎಲ್:ಸಿಆರ್-02:2024-25, ದಿನಾಂಕ: 23/05/2024 & 20/06/2024.

* * * * *

**ಪ್ರಸ್ತಾವನೆ:**

ನೈಸರ್ಗಿಕ ವಿಕೋಪಗಳಿಂದ ತೊಂದರೆ / ಹಾನಿ ಉಂಟಾದಾಗ ನೀಡಬಹುದಾದ ಪರಿಹಾರ ಮೊತ್ತದ ಬಗ್ಗೆ ಭಾರತ ಸರ್ಕಾರದ ಗೃಹ ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ Items of Expenditure ಮಾರ್ಗಸೂಚಿಗಳನ್ವಯ, ನೈಸರ್ಗಿಕ ವಿಕೋಪಗಳಲ್ಲಿ ಪರಿಹಾರ ಮೊತ್ತವನ್ನು ನಿಯಮಾನುಸಾರ ಪಾವತಿಸಲು 2024-25ನೇ ಸಾಲಿನಲ್ಲಿ ನೈಸರ್ಗಿಕ ವಿಕೋಪ ಪರಿಹಾರ ನಿಧಿಯಡಿಯಲ್ಲಿ ಕೇಂದ್ರ ಸರ್ಕಾರದ ಪಾಲು ರೂ. 732.00 ಕೋಟಿಗಳು ಹಾಗೂ ರಾಜ್ಯ ಸರ್ಕಾರದ ಪಾಲು ರೂ. 244.00 ಕೋಟಿಗಳನ್ನೊಳಗೊಂಡಂತೆ ಒಟ್ಟು ರೂ. 976.00 ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ. ಈ ಮೊತ್ತದಲ್ಲಿ ಭಾರತ ಸರ್ಕಾರದ ಮೊದಲನೇ ಕಂತು ಬಿಡುಗಡೆ ಮಾಡುವುದು ಬಾಕಿ ಇರುತ್ತದೆ. 2024-25 ನೇ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದ ಹಾನಿಗಳು ಉಂಟಾಗಬಹುದಾದ ಮೂಲಭೂತ ಸೌಕರ್ಯಗಳ ತುರ್ತು ರಿಪೇರಿ, ಮಾನವ ಮತ್ತು ಪ್ರಾಣಿ ಜೀವಹಾನಿ ಹಾಗೂ ಮನೆ ಹಾನಿಗಳಿಗೆ ಪರಿಹಾರ ಕಾರ್ಯಗಳನ್ನು ಕೈಗೊಳ್ಳಲು ಪಿ.ಡಿ. ಖಾತೆಗೆ ರೂ. 3.00 ಕೋಟಿ ಅನುದಾನ ಬಿಡುಗಡೆಗೊಳಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ಬೀಧರ್ ಜಿಲ್ಲೆಯ, ಜಿಲ್ಲಾಧಿಕಾರಿಗಳು, ಕೋರಿರುತ್ತಾರೆ.

ಅದರಂತೆ, ಪ್ರಸ್ತಾವನೆಯನ್ನು ನಿಯಮಾನುಸಾರ ಕೂಲಂಕಷವಾಗಿ ಪರಿಶೀಲಿಸಿ, ಮುಂದಿನ ದಿನಗಳಲ್ಲಿ ಪ್ರಕೃತಿ ವಿಕೋಪಗಳಿಂದ ಸಂಭವಿಸುವ ಹಾನಿಗಳಿಗೆ ತುರ್ತು ಪರಿಹಾರ ನೀಡಲು ಅನುವಾಗುವಂತೆ, ರೂ.3.00 ಕೋಟಿ ಅನುದಾನವನ್ನು ರಾಜ್ಯ ಪ್ರಕೃತಿ ವಿಕೋಪ ಪರಿಹಾರ ನಿಧಿ ಲೆಕ್ಕ ಶೀರ್ಷಿಕೆ: "2245-80-102-0-01-140" ರಡಿ ಬೀಧರ್ ಜಿಲ್ಲೆಯ ಜಿಲ್ಲಾಧಿಕಾರಿರವರ ಪಿ.ಡಿ. ಖಾತೆಗೆ ಬಿಡುಗಡೆಗೊಳಿಸಲು ತೀರ್ಮಾನಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ/256/ಟಿಎನ್‌ಆರ್/2024,**
**ಬೆಂಗಳೂರು; ದಿನಾಂಕ: 06.07.2024**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಮುಂದಿನ ದಿನಗಳಲ್ಲಿ ಪ್ರಕೃತಿ ವಿಕೋಪಗಳಿಂದ ಸಂಭವಿಸುವ ಹಾನಿಗಳಿಗೆ ನೈಸರ್ಗಿಕ ವಿಕೋಪಗಳಿಂದ ತೊಂದರೆ / ಹಾನಿ ಉಂಟಾದಾಗ ನೀಡಬಹುದಾದ ಪರಿಹಾರ ಮೊತ್ತದ ಬಗ್ಗೆ ಭಾರತ ಸರ್ಕಾರದ ಗೃಹ

ಮಂತ್ರಾಲಯವು ದಿನಾಂಕ:11/07/2023ರಂದು ಹೊರಡಿಸಿರುವ Items of Expenditure ಮಾರ್ಗಸೂಚಿಗಳನ್ವಯ, ನೈಸರ್ಗಿಕ ವಿಕೋಪಗಳಲ್ಲಿ ಪರಿಹಾರ ಮೊತ್ತವನ್ನು ನಿಯಮಾನುಸಾರ ಪಾವತಿಸಲು ಬೀದರ್ ಜಿಲ್ಲೆಯ ಜಿಲ್ಲಾಧಿಕಾರಿ ರವರ ಪಿ.ಡಿ. ಖಾತೆಗೆ 2024-25ನೇ ಸಾಲಿನ ರಾಜ್ಯ ವಿಪತ್ತು ಪರಿಹಾರ ನಿಧಿ ಲೆಕ್ಕ ಶೀರ್ಷಿಕೆ:2245-80-102-0-01-140" ರಡಿ ರೂ. 3.00 ಕೋಟಿ (ಮೂರು ಕೋಟಿ ರೂಪಾಯಿಗಳು ಮಾತ್ರ) ಗಳನ್ನು ಈ ಕೆಳಕಂಡ ಷರತ್ತಿಗೊಳಪಟ್ಟು ವೆಚ್ಚಮಾಡಲು ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ ಇವರಿಗೆ ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:**

1. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು 2024-25 ನೇ ಸಾಲಿನ ಮಳೆಹಾನಿ ಇಂದ ಉಂಟಾಗಿರುವ ಮೂಲಭೂತ ಸೌಕರ್ಯಗಳ ತುರ್ತು ದುರಸ್ಥಿ ಹಾಗೂ ಮುಂದಿನ ದಿನಗಳಲ್ಲಿ ತುರ್ತು ಅಗತ್ಯತೆಗಾಗಿ ಪ್ರಸ್ತುತ ಚಾಲ್ತಿಯಲ್ಲಿರುವ ಕೇಂದ್ರ ಸರ್ಕಾರದ SDRF ಮಾರ್ಗಸೂಚಿಯನ್ವಯ ಮಾತ್ರ ವೆಚ್ಚ ಭರಿಸುವುದು. ಕಾಯ್ದಿರಿಸಿರುವ ವೆಚ್ಚಗಳನ್ನು (Committed Expenditure) ಭರಿಸುವಂತಿಲ್ಲ. SDRF ಮಾರ್ಗಸೂಚಿ ದರಗಳನುಸಾರ ಹಾಗೂ SDRF ಮಾರ್ಗಸೂಚಿಗಳ ಪ್ರಕಾರ ನಿಗಧಿ ಆಗಿರುವ ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು. ಮಾರ್ಗಸೂಚಿ ದರಗಳಿಗಿಂತ ಹೆಚ್ಚು ವೆಚ್ಚ ಕಂಡುಬಂದಲ್ಲಿ ಅಥವಾ ಕಾಲಮಿತಿ ಒಳಗೆ ಇಲ್ಲದಿರುವ ಕಾಮಗಾರಿಗಳಿಗೆ ನಿಯಮಾನುಸಾರ ಸಂಬಂಧಪಟ್ಟ ಇಲಾಖೆಗಳಿಂದಲೇ ಭರಿಸತಕ್ಕದ್ದು.
2. ಲೋಕೋಪಯೋಗಿ ಇಲಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಇತರೆ ಇಲಾಖೆಗಳು ಬಳಸುತ್ತಿರುವ ಕಾಮಗಾರಿ ನಿರ್ವಹಣಾ (WorkTrack Software) ತಂತ್ರಾಂಶದ ಮೂಲಕ ವಿಪತ್ತು ನಿರ್ವಹಣೆಯಡಿ ಕೈಗೊಂಡಿರುವ ಮತ್ತು ಮುಂದೆ ಕೈಗೊಳ್ಳುವ ಕಾಮಗಾರಿಗಳನ್ನು ಪ್ರಾರಂಭದಿಂದ ಅಳವಡಿಸಿ ಪುನರಾವರ್ತನೆಯಾಗುವುದನ್ನು ತಡೆಗಟ್ಟುವುದು ಹಾಗೂ ಗುಣಮಟ್ಟ ಮತ್ತು ಪ್ರಗತಿ ಪರಿಶೀಲನೆ ನಡೆಸುವುದು.
3. ಈ ಆದೇಶದಲ್ಲಿ ಬಿಡುಗಡೆ ಮಾಡಿದ ಅನುದಾನವನ್ನು ಯಾವ ಉದ್ದೇಶಕ್ಕೆ ಒದಗಿಸಲಾಗಿದೆಯೋ ಅದೇ ಉದ್ದೇಶಕ್ಕೆ ಮಾತ್ರ ಜಿಲ್ಲಾಧಿಕಾರಿಗಳು ಬಳಸತಕ್ಕದ್ದು. ಅನುದಾನ ವೆಚ್ಚ ಮಾಡಿದ್ದಕ್ಕೆ ಸಂಬಂಧಿಸಿದಂತೆ ನಿಯಮಾನುಸಾರ ಲೆಕ್ಕ ಪತ್ರಗಳನ್ನು ಜಿಲ್ಲಾಧಿಕಾರಿಗಳು ಇಡತಕ್ಕದ್ದು ಮತ್ತು ಹಣಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸರ್ಕಾರಕ್ಕೆ ಸಲ್ಲಿಸತಕ್ಕದ್ದು, ಹಣಬಳಕೆ ಪ್ರಮಾಣ ಪತ್ರ ಸಲ್ಲಿಸಿದಲ್ಲಿ ಮಾತ್ರ ಮುಂದೆ ಹಣ ಬಿಡುಗಡೆ ಮಾಡಲಾಗುವುದು.
4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನದ ಮಾಸಿಕ ವೆಚ್ಚದ ವಿವರವನ್ನು ಕೇಂದ್ರೀಯ ಗೃಹ ಮಂತ್ರಾಲಯದ NDMIS Portal ನಲ್ಲಿ ಕಡ್ಡಾಯವಾಗಿ ಜಿಲ್ಲಾಧಿಕಾರಿಗಳು ನಮೂದಿಸುವುದು.
5. ಹಣ ಬಳಕೆಯಲ್ಲಿ ಯಾವುದೇ ಲೋಪವಾದಲ್ಲಿ ಜಿಲ್ಲಾಧಿಕಾರಿಗಳನ್ನೇ ನೇರವಾಗಿ ಜವಾಬ್ದಾರರನ್ನಾಗಿ ಮಾಡಲಾಗುವುದು.
6. ಈ ಅನುದಾನದಿಂದ ಭರಿಸುವ ಎಲ್ಲ ವೆಚ್ಚಗಳ ವಿವರಗಳನ್ನು ಕಡ್ಡಾಯವಾಗಿ ಜಿಲ್ಲಾಧಿಕಾರಿಗಳ ಅಧಿಕೃತ ಜಾಲತಾಣದಲ್ಲಿ ಪ್ರಚುರಪಡಿಸುವುದು.

ಮೇಲಿನಂತೆ ಜಿಲ್ಲಾಧಿಕಾರಿಗಳಿಗೆ ಬಿಡುಗಡೆ ಮಾಡಿರುವ ಅನುದಾನವನ್ನು ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ & ಸೇವೆಗಳು-3) ಇವರು ಲೆಕ್ಕ

ಶೀರ್ಷಿಕೆ "2245-80-102-0-01-140" ರಡಿ ಬೀದರ್ ಜಿಲ್ಲಾಧಿಕಾರಿಗಳ ಡ್ರಾಯಿಂಗ್ ಕೋಡ್ (DDO)ಗೆ ಅನುದಾನವನ್ನು ಅಪ್ ಲೋಡ್ ಮಾಡುವುದು.

ಮೇಲಿನಂತೆ ಬಿಡುಗಡೆಯಾದ ಅನುದಾನವನ್ನು ಜಿಲ್ಲಾಧಿಕಾರಿಗಳು ಪೇಯೀಸ್ ರಸೀದಿ ಮೂಲಕ ಡ್ರಾ ಮಾಡಿ ತಮ್ಮ DDRF PD ಖಾತೆಗೆ ಜಮಾ ಮಾಡಿಕೊಳ್ಳತಕ್ಕದ್ದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ / 498 / ವೆಚ್ಚ-7 /2024, ದಿನಾಂಕ: 25.06.2024 ರಲ್ಲಿ ನೀಡಿರುವ ಸಹಮತದನುಸಾರ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಎಸ್.ಆರ್.ಶಿವಶಂಕರ್)**
ಸರ್ಕಾರದ ಉಪ ಕಾರ್ಯದರ್ಶಿ,
ಕಂದಾಯ ಇಲಾಖೆ,
(ವಿಪತ್ತು ನಿರ್ವಹಣೆ ಮತ್ತು ನೋ.ಮು)

**ಇವರಿಗೆ:**

1. ಪ್ರಧಾನ ಮಹಾಲೇಖಪಾಲರು (A & E), ಕರ್ನಾಟಕ, ಪಿ.ಬಿ.ನಂ. 5329/5369 ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
2. ಪ್ರಧಾನ ಮಹಾಲೇಖಪಾಲರು (G & SSA), ಕರ್ನಾಟಕ, ಪಿ.ಬಿ.ನಂ. 5398 ನ್ಯೂ ಬಿಲ್ಡಿಂಗ್ 'ಆಡಿಟ್ ಭವನ', ಬೆಂಗಳೂರು.
3. ಜಿಲ್ಲಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್.
4. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
5. ಜಂಟಿ ನಿರ್ದೇಶಕರು, ಖಜಾನೆ ಆಯುಕ್ತಾಲಯ, KPCL, ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7 & 8), ವಿಧಾನ ಸೌಧ, ಬೆಂಗಳೂರು.
7. ಜಿಲ್ಲಾ ಖಜಾನಾಧಿಕಾರಿಗಳು, ಬೀದರ್ ಜಿಲ್ಲೆ, ಬೀದರ್.

**ಪ್ರತಿ:**

1. ಮಾನ್ಯ ಕಂದಾಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಕಾಸ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ), ಬಹುಮಹಡಿ ಕಟ್ಟಡ, ಬೆಂಗಳೂರು.
3. ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಆಪ್ತ ಸಹಾಯಕರು, ಬೆಂಗಳೂರು.
4. ಸರ್ಕಾರದ ಉಪ ಕಾರ್ಯದರ್ಶಿಗಳು, ಕಂದಾಯ ಇಲಾಖೆ (ವಿ.ನಿ.), ಇವರ ಆಪ್ತ ಸಹಾಯಕರು, ಬಹುಮಹಡಿ ಕಟ್ಟಡ, ಬೆಂಗಳೂರು.
5. ಕಂದಾಯ ಇಲಾಖೆ (ವಿ.ನಿ.), ಲೆಕ್ಕ ಪತ್ರ ಶಾಖೆ.
6. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.